ಭಾನುವಾರ 07–09–2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01–ಸಂಚಿಕೆ 39 Digital Varthe Kannada Daily Volume 01 - Issue 39 Sunday 07-09-2025 Price: 5/- Rs 2 Pages Bengalore

DIGITAL VARTHE
www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ



ಬೆಂಗಳೂರು ಉತ್ತರ ತಾಲೋಕು ಹುಣ್ಣಿಗೆರೆ ಗ್ರಾಮದ ಶ್ರೀ ವಿನಾಯಕ ಗೆಳೆಯರ ಬಳಗದ ವತಿಯಿಂದ ಗಣೇಶ ಪ್ರತಿಷ್ಠಾಪನೆ

## ಮೋದಿ ನನ್ನ ಬೆಸ್ಟ್ ಫ್ರೆಂಡ್, ಮೋದಿ ಗ್ರೇಟ್ : ರಾಗ ಬದಲಿಸಿದ ಟ್ರಂಪ್





ನವದೆಹಲಿ: ಎಸ್‌ಸಿಒ ಶೃಂಗಸಭೆಯ ನಂತರ ಭಾರತ ಮತ್ತು ಅಮೆರಿಕ ನಡುವಿನ ಸಂಬಂಧ ಮುಗಿದೇ ಹೋಯಿತು ಎಂದು ಎಲ್ಲರೂ ಭಾವಿಸಿದ್ದ ಸಂದರ್ಭದಲ್ಲೇ ಟ್ರಂಪ್ ಮತ್ತು ಮೋದಿ ಮತ್ತೆ ಪರಸ್ಪರ ಸ್ನೇಹ ಹಸ್ತ ಚಾಚಿರುವುದು ಇಡೀ ವಿಶ್ವವನ್ನೇ ನಿಬ್ಬೆರಗಾಗಿಸಿದೆ. ನಾನು (ನರೇಂದ್ರ) ಮೋದಿ ಅವರೊಂದಿಗೆ ಯಾವಾಗಲೂ ಸ್ನೇಹಿತರಾಗುತ್ತೇನೆ, ಅವರು ಒಬ್ಬ ಉತ್ತಮ ಪ್ರಧಾನಿ. ಅವರು ಅದ್ಭುತ. ನಾನು ಯಾವಾಗಲೂ ಸ್ನೇಹಿತರಾಗುತ್ತೇನೆ, ಆದರೆ ಈ ನಿರ್ದಿಷ್ಟ ಕ್ಷಣದಲ್ಲಿ ಅವರು ಏನು ಮಾಡುತ್ತಿದ್ದಾರೆಂದು ನನಗೆ ಇಷ್ಟವಿಲ್ಲ ಎಂದು ಟ್ರಂಪ್ ಓವಲ್ ಕಚೇರಿಯಲ್ಲಿ ಹೇಳುವ ಮೂಲಕ ಭಾರತದತ್ತ ಸ್ನೇಹ ಹಸ್ತ ಚಾಚಿದ್ದಾರೆ.

ಆದರೆ ಭಾರತ ಮತ್ತು ಅಮೆರಿಕ ವಿಶೇಷ ಸಂಬಂಧವನ್ನು ಹೊಂದಿವೆ. ಚಿಂತಿಸಲು ಏನೂ ಇಲ್ಲ. ನಮಗೆ ಸಂದರ್ಭಾನುಸಾರ ಕ್ಷಣಗಳಿವೆ ಎಂದು ಟ್ರಂಪ್ ನಗುತ್ತಾ ಹೇಳಿದರು.ಉಭಯ ದೇಶಗಳ ನಡುವಿನ ಸಂಬಂಧಗಳು ಎರಡು ದಶಕಗಳಲ್ಲಿಯೇ ಅತ್ಯಂತ ಕೆಟ್ಟ ಹಂತದಲ್ಲಿ ಮುಂದುವರಿಯುತ್ತಿರುವುದರಿಂದ, ಭಾರತದೊಂದಿಗಿನ ಸಂಬಂಧಗಳನ್ನು ಪುನಃಸ್ಥಾಪಿಸಲು ಅವರು ಸಿದ್ಧರಿದ್ದಾರೆಯೇ ಎಂಬ ಪ್ರಶ್ನೆಗೆ ಅಧ್ಯಕ್ಷರು ಉತ್ತರಿಸುತ್ತಿದ್ದರು. ಭಾರತ ರಷ್ಯಾದಿಂದ ಇಷ್ಟೊಂದು ತೈಲ ಖರೀದಿಸುತ್ತಿದೆ ಎಂದು ನನಗೆ ತುಂಬಾ ನಿರಾಶೆಯಾಗಿದೆ, ಮತ್ತು ನಾನು ಅವರಿಗೆ ಅದನ್ನು ತಿಳಿಸಿದೆ. ನಾವು ಭಾರತದ ಮೇಲೆ ಬಹಳ ದೊಡ್ಡ ಸುಂಕವನ್ನು ವಿಧಿಸಿದ್ದೇವೆ, ಶೇ. 50 ರಷ್ಟು ಸುಂಕ, ತುಂಬಾ ಹೆಚ್ಚಿನ ಸುಂಕ. ನಾನು (ಪ್ರಧಾನಿ ನರೇಂದ್ರ) ಮೋದಿಯೊಂದಿಗೆ ಚೆನ್ನಾಗಿ ಹೊಂದಿಕೊಳ್ಳುತ್ತೇನೆ, ಅವರು ಅದ್ಭುತರು.

ಅವರು ಎರಡು ತಿಂಗಳ ಹಿಂದೆ ಇಲ್ಲಿದ್ದರು ಎಂದು ಟ್ರಂಪ್ ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅಮೆರಿಕವು ಭಾರತ ಮತ್ತು ರಷ್ಯಾವನ್ನು ಚೀನಾಕ್ಕೆ ಕಳೆದುಕೊಂಡಿದೆ ಎಂಬ ಪ್ರಶ್ನೆಗೆ ಉತ್ತರಿಸುತ್ತಾ ಹೇಳಿದರು. ಟ್ರಂಪ್ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾದ ನಾಯಕ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಮೋದಿಯ ಹಳೆಯ ಫೋಟೋವನ್ನು ಸಹ ಪೋಸ್ಟ್ ಮಾಡಿದ್ದರು.

ಚೀನಾದ ಟಿಯಾಂಜಿನ್ ನಗರದಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆಯ ಶೃಂಗಸಭೆಯಲ್ಲಿ ಮೋದಿ, ಕ್ಸಿ ಮತ್ತು ಪುಟಿನ್ ನಡುವಿನ ಸ್ನೇಹವು ಜಾಗತಿಕ ಗಮನ ಸೆಳೆದ ಕೆಲವು ದಿನಗಳ ನಂತರ ಟ್ರಂಪ್ ಅವರ ಪೋಸ್ಟ್ ಸಾಮಾಜಿಕ ಮಾಧ್ಯಮದಲ್ಲಿ ಬಂದಿದೆ. ಭಾರತ ಮತ್ತು ಇತರ ದೇಶಗಳೊಂದಿಗೆ ವ್ಯಾಪಾರ ಮಾತುಕತೆಗಳು ಹೇಗೆ ನಡೆಯುತ್ತಿವೆ ಎಂಬ ಪ್ರಶ್ನೆಗೆ ಟ್ರಂಪ್, ಅವರು ಉತ್ತಮವಾಗಿ ನಡೆಯುತ್ತಿದ್ದಾರೆ.

ಇತರ ದೇಶಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ನಾವು ಅವರೆಲ್ಲರೊಂದಿಗೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದೇವೆ. ಗೂಗಲ್‌ನಲ್ಲಿ ಮಾತ್ರವಲ್ಲದೆ ನಮ್ಮ ಎಲ್ಲಾ ದೊಡ್ಡ ಕಂಪನಿಗಳೊಂದಿಗೆ ನಡೆಯುತ್ತಿರುವುದರಿಂದ ನಾವು ಯುರೋಪಿಯನ್ ಒಕ್ಕೂಟದ ಬಗ್ಗೆ ಅಸಮಾಧಾನಗೊಂಡಿದ್ದೇವೆ ಎಂದು ಹೇಳಿದರು. ಏತನ್ಮಧ್ಯೆ, ಟ್ರಂಪ್ ಆಡಳಿತದ ವ್ಯಾಪಾರ ಮತ್ತು ಉತ್ಪಾದನೆಯ ಹಿರಿಯ ಸಲಹೆಗಾರ ಪೀಟರ್ ನವರೊ, ಭಾರತದ ಅತ್ಯಧಿಕ ಸುಂಕಗಳು ಅಮೆರಿಕದ ಉದ್ಯೋಗಗಳಿಗೆ ನಷ್ಟವನ್ನುಂಟುಮಾಡುತ್ತವೆ ಎಂದು ಎಕ್?ಸನಲ್ಲಿ ಪೋಸ್ಟ್‌ನಲ್ಲಿ ಹೇಳಿದ್ದಾರೆ.ರಷ್ಯಾದ ಯುದ್ಧ ಯಂತ್ರವನ್ನು ಪೋಷಿಸಲು ಭಾರತವು ಲಾಭ ಮತ್ತು ಆದಾಯಕ್ಕಾಗಿ ರಷ್ಯಾದ ತೈಲವನ್ನು ಖರೀದಿಸುತ್ತದೆ. ಉಕ್ರೇನಿಯನ್ನರು ಹಾಗೂ ರಷ್ಯನ್ನರು ಸಾಯುತ್ತಾರೆ. ಯುಎಸ್ ತೆರಿಗೆದಾರರು ಹೆಚ್ಚು ಖರ್ಚು ಮಾಡುತ್ತಾರೆ. ಭಾರತವು ಸತ್ಯನಿಭಾಯಿಸಲು ಸಾಧ್ಯವಿಲ್ಲ ಎಂದು ನವರೊ ಹೇಳಿದರು.


ರಷ್ಯಾದ ಉಕ್ರೇನ್ ಯುದ್ಧಕ್ಕೆ ಭಾರತವು ನಿಧಿ ನೀಡುವುದನ್ನು ಮುಂದುವರಿಸುವುದರಿಂದ ಟ್ರಂಪ್ ಮತ್ತು ಅವರ ವ್ಯಾಪಾರ ತಂಡವು ನಿರಾಶೆಗೊಂಡಿದೆ ಎಂದು ರಾಷ್ಟ್ರೀಯ ಆರ್ಥಿಕ ಮಂಡಳಿಯ ನಿರ್ದೇಶಕ ಕೆವಿನ್ ಹ್ಯಾಸೆಟ್ ಹೇಳಿದ್ದಾರೆ.ರಷ್ಯಾದ ಉಕ್ರೇನ್ ಯುದ್ಧಕ್ಕೆ ಭಾರತವು ಹಣಕಾಸು ಒದಗಿಸುವುದನ್ನು ಮುಂದುವರಿಸುವುದರಿಂದ ವ್ಯಾಪಾರ ತಂಡ ಮತ್ತು ಅಧ್ಯಕ್ಷರು ನಿರಾಶೆಗೊಂಡಿದ್ದಾರೆ ಎಂದು ನಾನು ಭಾವಿಸುತ್ತೇನೆ ಮತ್ತು ಅದು ಶೀಘ್ರದಲ್ಲೇ ಸಕಾರಾತ್ಮಕ ಅಭಿವೃದ್ಧಿಯನ್ನು ಪಡೆಯುವುದು ರಾಜತಾಂತ್ರಿಕ ಸಮಸ್ಯೆಯಾಗಿದೆ ಎಂದು ಹ್ಯಾಸೆಟ್ ಶ್ವೇತಭವನದಲ್ಲಿ ಸುದ್ದಿಗಾರರಿಗೆ ತಿಳಿಸಿದರು.ಟ್ರಂಪ್ ಸ್ನೇಹಹಸ್ತಕ್ಕೆ ಮೋದಿ ಶ್ಲಾಘನೆ; ಭಾರತ–ಅಮೆರಿಕ ಸಂಬಂಧಗಳ ಬಗ್ಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸಕಾರಾತಕ ಹೇಳಿಕೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.ಸುಂಕಗಳು ಮತ್ತು ರಷ್ಯಾದ ತೈಲ ಖರೀದಿಗೆ ಸಂಬಂಧಿಸಿದಂತೆ ವಾಷಿಂಗ್ಟನ್ ಮತ್ತು ದೆಹಲಿ ನಡುವಿನ ಪ್ರಸ್ತುತ ಉದ್ವಿಗ್ನತೆಯ ನಡುವೆ, ಅಮೆರಿಕ ಮತ್ತು ಭಾರತ ವಿಶೇಷ ಸಂಬಂಧವನ್ನು ಹೊಂದಿವೆ ಮತ್ತು ಅವರು ಯಾವಾಗಲೂ ಪ್ರಧಾನಿಯೊಂದಿಗೆ ಸ್ನೇಹಿತರಾಗಿರುತ್ತಾರೆ ಎಂದು ಟ್ರಂಪ್ ಹೇಳಿದ ಗಂಟೆಗಳ ನಂತರ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮೋದಿ ಅವರ ಈ ಕಾಮೆಂಟ್‌ಗಳು ಬಂದಿವೆ. ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ಭಾವನೆಗಳನ್ನು ಮತ್ತು ನಮ್ಮ ಸಂಬಂಧಗಳ ಬಗ್ಗೆ ಸಕಾರಾತ್ಮಕ ಮೌಲ್ಯಮಾಪನವನ್ನು ಆಳವಾಗಿ ಪ್ರಶಂಸಿಸುತ್ತೇವೆ ಮತ್ತು ಸಂಪೂರ್ಣವಾಗಿ ಪರಸ್ಪರ ಪ್ರತಿಕ್ರಿಯಿಸುತ್ತೇವೆ ಎಂದು ಮೋದಿ ಹೇಳಿದರು. ಭಾರತ ಮತ್ತು ಅಮೆರಿಕಗಳು ಬಹಳ ಸಕಾರಾತ್ಮಕ ಮತ್ತು ಭವಿಷ್ಯ–ದೃಷ್ಟಿಕೋನದ ಸಮಗ್ರ ಮತ್ತು ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ಹೊಂದಿವೆ ಎಂದು ಅವರು ಹೇಳಿದರು.

## ಬಾನು ಮುಸ್ತಾಕ್ ಅವರಿಂದ ದಸರಾ ಉದ್ಘಾಟನೆ ಪ್ರಶ್ನಿಸಿ ಹೈಕೋರ್ಟ್ ಮೊರೆಹೋದ ಪ್ರತಾಪ್ ಸಿಂಹ



ಬೆಂಗಳೂರು: ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ಹಬ್ಬವನು ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಸ್ತಾಕ್ ಅವರಿಂದ ಉದ್ಘಾಟನೆ ನೆರವೇರಿಸದಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಮಾಜಿ ಸಂಸದ ಪ್ರತಾಪ್ ಸಿಂಹ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಹಿಂದೂ ಮತ್ತು ಕನ್ನಡ ವಿರೋಧಿ ಭಾವನೆ ಹೊಂದಿರುವ ಬಾನು ಮುಸ್ತಾಕ್ ಅವರಿಂದ ದಸರಾ ಉದ್ಘಾಟಿಸಿದರೆ ಶತಮಾನಗಳಿಂದಲೂ ಆಚರಿಸಿಕೊಂಡು ಬಂದಿರುವ ಸಂಪ್ರದಾಯಕ್ಕೆ ಧಕ್ಕೆ ಬರುತ್ತದೆ ಎಂದು ಅರ್ಜಿಯಲ್ಲಿ ಉಲ್ಲೇಖ ಮಾಡಿದ್ದಾರೆ. ರಾಜ್ಯ ಸರ್ಕಾರ ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಂಡಿದೆ. ದಸರಾ ಹಿಂದೂಗಳು ಆಚರಿಸುವ ಹಬ್ಬವಾಗಿದೆ. ನಾಡದೇವತೆ ಚಾಮುಂಡೇಶ್ವರಿಗೆ ಕುಂಕುಮಾರ್ಚನೆ ಮಾಡಬೇಕು. ಇಲ್ಲವೇ ಉದ್ಘಾಟನೆ ಮಾಡುವವರು ಹಣೆಗೆ ತಿಲಕ, ಗಂಧದ ಕಡ್ಡಿ ಬೆಳಗುವುದು ಮಂಗಳಾರತಿ ಮಾಡುವುದು ನಮ ಸಂಪ್ರದಾಯವಾಗಿದೆ. ಮೂರ್ತಿ ಪೂಜೆ ವಿರೋಧಿಸುವವರು ದಸರಾ ಉದ್ಘಾಟನೆ ಮಾಡುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿದ್ದಾರೆ. ಬಾನು ಮುಸ್ತಾಕ್ ಅವರಿಂದ ದಸರಾ ಉದ್ಘಾಟನೆಗೆ ಸ್ವತಃ ಮೈಸೂರಿನ ರಾಜಮನೆತನದ ಕುಟುಂಬದ ಸದಸ್ಯರು ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸಿದ್ದಾರೆ.



ನೆಲಮಂಗಲ: ತಾಲೂಕಿನ ತೋಣಚಿನಕುಪ್ಪೆ ಗಜಾನನ ಗೆಳೆಯರ ಬಳಗದ ವತಿಯಿಂದ 15 ನೇ ವರ್ಷದ ಗಣೇಶ ಪ್ರತಿಷ್ಠಾಪನಾ ಕಾರ್ಯಕ್ರಮವನ್ನ ಅತ್ಯಂತ ಪರಿಣಾಮಾತ್ಮಕ ಹಾಗೂ ಪ್ರಯೋಜನಶೀಲವಾಗಿ ಆಚರಿಸಲಾಯಿತು. ಗಣೇಶ ಪ್ರತಿಷ್ಠಾಪನೆಯ ಪ್ರಯುಕ್ತ ಉಚಿತ ಆರೋಗ್ಯ ಶಿಬಿರವನ್ನ ಆಯೋಜಿಸಲಾಗಿದ್ದು ಶ್ರೀ ಸಿದ್ದಾರ್ಥ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಸಂಸ್ಥೆ ವತಿಯೊಂದ ಶಿಬಿರವನ್ನ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ವೈದ್ಯರಾದ ಡಾ ಸಹನಾ, ಐಶ್ವರ್ಯ, ಅಖಿಲ್, ವೀರೇಶ್, ವರ್ಷಿತ, ಮಂಜುನಾಥ್, ಸುಹಾಸ್ ನೆರೆವರ್ಸಿಕೊಟ್ಟಿದ್ದು ಗಜಾನನ ಗೆಳೆಯರ ಬಳಗದ ಪವನ್, ನಾಗೇಶ್, ಪುರುಷೋತ್ತಮ್, ಮನು, ರಾಜೇಶ್, ಶಶಾಂಕ್, ಆಫ್ರೀದ್ ಸೇರಿದಂತೆ ಯುವಕರು ಉಪಸ್ಥಿತರಿದ್ದರು.

## ಅರ್ಥ ಪೂರ್ಣ ಹುಟ್ಟು ಹಬ್ಬ ಆಚರಿಸಿಕೊಂಡ ಉಮೇಶ್ ಯಜಮಾನ್ರು

ನೆಲಮಂಗಲ: ಕರ್ನಾಟಕ ರಕ್ಷಣಾ ವೇದಿಕೆ ಶಿವರಾಮೇಗೌಡರ ಬಣ ನೆಲಮಂಗಲ ತಾಲೂಕು ಕಾರ್ಮಿಕ ಘಟಕದ ಅಧ್ಯಕ್ಷ ಯಜಮಾನ ಉಮೇಶ್ ಅವರು ತಮ್ಮ 49ನೇ ವರ್ಷದ ಜನ್ಮದಿನವನ್ನು ಸಮಾಜಮುಖಿ ಕಾರ್ಯದ ಮೂಲಕ ಅರ್ಥಪೂರ್ಣವಾಗಿ ಆಚರಿಸಿಕೊಂಡರು. ಈ ಅಂಗವಾಗಿ ಅವರು ನೆಲಮಂಗಲ ತಾಲೂಕು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ಅಲ್ಲಿರುವ ಎಲ್ಲಾ ರೋಗಿಗಳಿಗೆ, ವೈದ್ಯಕೀಯ ಸಿಬ್ಬಂದಿಗಳಿಗೆ ಮತ್ತು ಕರ್ತವ್ಯ ನಿರತ ವೈದ್ಯರಿಗೆ ಹಣ್ಣುಗಳ ಕಿಟ್‌ಗಳನ್ನು ವಿತರಿಸಿ, ಅವರೊಂದಿಗೆ ತಮ್ಮ ಹುಟ್ಟುಹಬ್ಬದ ಸಂಭ್ರಮವನ್ನು ಹಂಚಿಕೊಂಡರು.

ಸಾಮಾಜಿಕ ಹೊಣೆಗಾರಿಕೆಯನ್ನು ಪ್ರಾಧಾನ್ಯಗೊಳಿಸುವ ಈ ರೀತಿಯ ಕಾರ್ಯಕ್ರಮವು ರೋಗಿಗಳಲ್ಲಿ ಸಂತೋಷ ಮತ್ತು ಧೈರ್ಯ ತುಂಬುವ ಕಾರ್ಯವಾಯಿತು. ಕಾರ್ಯಕ್ರಮದಲ್ಲಿ ಸರ್ಕಾರಿ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ



ಡಾ. ಸೋನಿಯಾ, ಮಕ್ಕಳ ವೈದ್ಯ ಡಾ. ರಾಜು, ಶುಶ್ರೂಷಕ ಅಧಿಕಾರಿ ದೇವಿರಮ್ಮ, ಕರವೇ ವಿದ್ಯಾರ್ಥಿನಿ ಘಟಕದ ಅಧ್ಯಕ್ಷ ಯಶವಂತ್, ಮಂಜುನಾಥ್, ವಿಷ್ಣು ಸೇನೆ ಕುಮಾರ್, ಮಹಾಲಕ್ಷ್ಮಿ ವೈನ್ ಮಾಲೀಕ ರವಿಕುಮಾರ್ ಸೇರಿದಂತೆ ಹಲವಾರು ಗಣ್ಯರು ಹಾಗೂ ಸ್ಥಳೀಯ ಉದ್ಯಮಿಗಳು ಭಾಗವಹಿಸಿದ್ದರು.

## ಡಿಸಿಸಿ ಬ್ಯಾಂಕ್ ಮತ್ತು ಟಿಎಪಿಸಿಎಂಎಸ್ ಚುನಾವಣಾ ಪೂರ್ವಭಾವಿ ಸಭೆ

ಕೆ.ಆರ್.ಪೇಟೆ: ಪಟ್ಟಣದ ಬಸವೇಶ್ವರನಗರದಲ್ಲಿರುವ ತಾಲ್ಲೂಕು ಜೆಡಿ–ಎಸ್ ಕಚೇರಿಯಲ್ಲಿ ಮುಂಬರುವ ಡಿಸಿಸಿ ಬ್ಯಾಂಕ್ ಚುನಾವಣೆ ಹಾಗೂ ಟಿಎಪಿಸಿಎಂಎಸ್ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ಆಯ್ಕೆ ಸಂಬಂಧ ಶಾಸಕ ಹೆಚ್.ಟಿ.ಮಂಜು ಅಧ್ಯಕ್ಷತೆಯಲ್ಲಿ ಜೆಡಿಎಸ್ ಕಾರ್ಯಕರ್ತರ ಪೂರ್ವಭಾವಿ ಸಭೆ ನಡೆಯಿತು.

ಶಾಸಕ ಹೆಚ್.ಟಿ.ಮಂಜು ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿ ಮುಂಬರುವ ತಿಂಗಳು ನಡೆಯುವ ಡಿಸಿಸಿ ಬ್ಯಾಂಕ್ ಮತ್ತು ಟಿಎಪಿಸಿಎಂಎಸ್ ಚುನಾವಣೆಯಲ್ಲಿ ನಮ್ಮ ಜೆಡಿಎಸ್ ಪಕ್ಷದ ಅಭ್ಯರ್ಥಿಗಳು ಗೆಲ್ಲುವುದು ಖಚಿತವಾಗಿದೆ. ಆದರೂ ಉದಾಸೀನತೆ ಮಾಡದೇ ಹೆಚ್ಚಿನ ಬಹುಮತದಿಂದ ಗೆಲ್ಲಿಸಲು ನಾವು ಹೆಚ್ಚಿನ ಶ್ರಮ ವಹಿಸಬೇಕಾದ ಅಗತ್ಯವಿದೆ. ಜೆಡಿಎಸ್ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರೂ ಶಿಸ್ತಿನ ಸಿಪಾಯಿಗಳಂತೆ ಕೆಲಸ ಮಾಡಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ



ಶ್ರಮಿಸಬೇಕು ಎಂದು ಹೆಚ್.ಟಿ.ಮಂಜು ಕರೆ ನೀಡಿದರು. ತಾಲ್ಲೂಕಿನಲ್ಲಿ ಜೆಡಿಎಸ್ ಪಕ್ಷ ಸಧೃಢವಾಗಿದೆ. ಕಾರ್ಯಕರ್ತರು ಮುಂದಿನ ಎಲ್ಲಾ ಚುನಾವಣೆಗಳಲ್ಲಿಯೂ ತಮ್ಮ ಸಾಮರ್ಥ್ಯ ತೋರಿಸಲು ಸಿದ್ಧರಿದ್ದಾರೆ. ಟಿಎಪಿಸಿಎಂಎಸ್ ಹಾಗೂ ಎಂಡಿಸಿಸಿ ಬ್ಯಾಂಕ್ ಚುನಾವಣೆಗಳಲ್ಲಿ ಗೆಲುವು ಸಾಧಿಸಲಿದ್ದೇವೆ. ಕಾಂಗ್ರೆಸ್ ವಾಮಮಾರ್ಗದ ಮೂಲಕ ತನ್ನ ಅಧಿಕಾರ ದುರ್ಬಳಕೆ ಮಾಡಿಕೊಳ್ಳುವ ಮನಸ್ಥಿತಿಯಲ್ಲಿದೆ. ಆದರೆ ಕೆಲವೊಂದು ಸನ್ನಿವೇಶಗಳನ್ನು ಹೊರತುಪಡಿಸಿ ಪಕ್ಷಕ್ಕೆ ಹಾಗೂ ಕಾರ್ಯಕರ್ತರಿಗೆ ಬೆನ್ನುಲುಬಾಗಿ ನಿಂತಿದ್ದೇನೆ.

ನಾನು ಪಕ್ಷದ ಶಿಸ್ತಿನ ಸಿಪಾಯಿಯಾಗಿದ್ದು ಎಂತಹ ಕಠಿಣ ಪರಿಸ್ಥಿತಿಯಲ್ಲಿಯೂ ಕಾರ್ಯಕರ್ತರ ಹಿತ ಕಾಯುವ ಕೆಲಸ ಮಾಡುತ್ತೇನೆ. ಕೆಲವು ಸೊಸೈಟಿಗಳಲ್ಲಿ ಅಧಿಕಾರಿಗಳನ್ನು ಬಳಸಿ ಅಧಿಕಾರ ದುರ್ಬಳಕೆ ಮಾಡಿಕೊಳ್ಳಲು ಯತ್ನಿಸುತ್ತಿದ್ದಾರೆ. ಕೆಲವು ಕಡೆ ನಮ್ಮ ಕಾರ್ಯಕರ್ತರ ಮೇಲೆ ವಿನಾಕಾರಣ ಕೇಸು ದಾಖಲಿಸಿ ಕಾರ್ಯಕರ್ತರನ್ನು ಬೆದರಿಸುವ ಕೆಲಸ ಮಾಡುತ್ತಿದ್ದಾರೆ ಆದ–'ರೂ ನಮ್ಮ ಜೆಡಿಎಸ್ ಬಂಡೆಯ0ತೆ ನಿಂತು ಪಕ್ಷ ಉಳಿಸುವ ಕೆಲಸ ಮಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ನಾಯಕರುಗಳ ಇಂಥ–'ಹ ಕುತಂತ್ರಗಳಿಗೆ ಜೆಡಿಎಸ್ ಧೃತಿಗೆಡಬೇಕಾಗಿಲ್ಲ. ನಾವುಗಳು ಪಾರದರ್ಶಕತೆಯಿಂದ ಚುನಾವಣೆ ಮಾಡೋಣ. ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳು ಜಯಶೀಲರಾಗಲು ಕಾಯಾ ವಾಚಾ, ಮನಸಾ ಕೆಲಸ ಮಾಡಬೇಕು ಎಂದರು.

ಪೂರ್ವಭಾವಿ ಸಭೆಯಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಹೆಚ್.ಕೆ.ಅಶೋಕ್, ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆಯ ಮಾಜಿ ಉಪಾಧ್ಯಕ್ಷ ಬೋಳಮಾರನಹಳ್ಳಿ ಮಂಜುನಾಥ್, ತಾ.ಪಂ.ಮಾಜಿ ಸದಸ್ಯರಾದ ಮಲ್ಲೇನಹಳ್ಳಿ ಮೋಹನ್, ಹೆಳವೇಗೌಡ, ಎಂ.ಸಿ.ರಾಮೇಗೌಡ, ರಾಜ್ಯ ಯುವ ಜೆಡಿಎಸ್ ಪ್ರಧಾನ ಕಾರ್ಯದರ್ಶಿಗಳು ಹಾಗೂ ಗಂಜಿಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಕುರುಬಹಳ್ಳಿ ಕೆ.ಬಿ.ನಾಗೇಶ್, ಮಂಡ್ಯ ಜಿಲ್ಲಾ ಜೆಡಿ–ಎಸ್ ಪ್ರಧಾನ ಕಾರ್ಯದರ್ಶಿ ಬಿ.ಎಂ.ಕಿರಣ್, ಜಿಲ್ಲಾ ಯುವ ಜೆಡಿಎಸ್ ಘಟಕದ ಕಾರ್ಯದರ್ಶಿ ಅಜಯ್ ರಾಮೇಗೌಡ, ತಾಲ್ಲೂಕು ಯುವ ಜೆಡಿಎಸ್ ಅಧ್ಯಕ್ಷ ವಡ್ಡರಹಳ್ಳಿ ಮಹಾದೇವೇಗೌಡ, ತಾಲ್ಲೂಕು ಮಹಿಳಾ ಜೆಡಿಎಸ್ ಘಟಕದ ಅಧ್ಯಕ್ಷೆ ರೇಖಾಲೋಕೇಶ್, ತಾಲ್ಲೂಕು ಕಾರ್ಯದರ್ಶಿ ರತಿಮಹದೇವ್, ಡಿಸಿಸಿ ಬ್ಯಾಂಕ್ ಅಭ್ಯರ್ಥಿ ಜೈನ್ನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕ ಬಿ.ಧರಣೇಶ್, ತಾಲ್ಲೂಕು ಟಿಎಪಿಸಿಎಂಎಸ್ ನಿರ್ದೇಶಕರಾದ ಎಸ್.ಎಲ್.ಮೋಹನ್, ಬಲದೇವ್, ಕೊರಟೀಕೆರೆ ದಿನೇಶ್, ಬೊಮ್ಮೇಹಳ್ಳಿ ಮಂಜುನಾಥ್, ಜೆಡಿಎಸ್ ಹೋಬಳಿ ಘಟಕದ ಅಧ್ಯಕ್ಷರಾದ ವಸಂತಕುಮಾರ್, ಬಸವಲಿಂಗಪ್ಪ, ಬಲ್ಲೇನಹಳ್ಳಿ ನಂದೀಶ್, ಸಂತೇಬಾಚಹಳ್ಳಿ ರವಿಕುಮಾರ್, ಸ್ವಾಮೀಗೌಡ, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ತೋಟಪ್ಪಶೆಟ್ಟಿ, ನಂಜಪ್ಪ, ಸಿಂಧಘಟ್ಟ ಗಿರೀಶ್, ಚಿಕ್ಕೋಸಹಳ್ಳಿ ನಾಗೇಶ್, ಹರೀನಹಳ್ಳಿ ರಘು ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು.

ಡಿಜಿಟಲ್ ವಾರ್ತೆ

# ಶಿಕ್ಷಣ ವೃತ್ತಿ ಅತೀ ಶ್ರೇಷ್ಠ ವೃತ್ತಿ: ಶಾಸಕ ಹೆಚ್ ಟಿ ಮಂಜು

ಕೆ.ಆರ್.ಪೇಟೆ: ಶಿಕ್ಷಕ ವೃತ್ತಿಯು ಎಲ್ಲಾ ವೃತ್ತಿಗಿಂತಲೂ ಶ್ರೇಷ್ಠ ವೃತ್ತಿಯಾಗಿದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಜ್ಞಾನ, ನೈತಿ-ಕ ಮೌಲ್ಯಗಳನ್ನು ಕಲಿಸಿ ಉತ್ತಮ ವ್ಯಕ್ತಿಯನ್ನಾಗಿ ರೂಪಿಸುತ್ತಾರೆ. ಈ ಮೂಲಕ ತನ್ನ ವಿದ್ಯಾರ್ಥಿ ಇಡೀ ಪ್ರಪಂಚದಲ್ಲಿ ಯಾವುದೇ ದೇಶಕ್ಕೆ ಹೋದರೂ ಜೀವನ ನಡೆಸುವ ಸಾಮರ್ಥ್ಯ ಮತ್ತು ಚೈತನ್ಯವನ್ನು ತುಂಬುವ ಅಪರೂಪದ ವ್ಯಕ್ತಿ ಶಿಕ್ಷಕರಾಗಿದ್ದಾರೆ. ಇದ-ರಿಂದಾಗಿ ಪ್ರಪಂಚದಲ್ಲಿ ಶಿಕ್ಷಕರಿಗೆ ಮಾತ್ರ ಎಲ್ಲರಿಗಿಂತ ವಿಶೇಷವಾದ ಶ್ರೇಷ್ಠ ಗೌರವ ಸಲ್ಲುತ್ತದೆ ಎಂದು ಶಾಸಕ ಹೆಚ್.ಟಿ.ಮಂಜು ಹೇಳಿದರು.



ಅವರು ಪಟ್ಟಣದ ಕೆಪಿಎಸ್ ಶಾಲೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಆವರಣದಲ್ಲಿ ತಾಲ್ಲೂಕು ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಮತ್ತು ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಿಕ್ಷಕರು ಮಕ್ಕಳನ್ನು ಜ್ಞಾನವಂತರನ್ನಾಗಿಸುವ ಹಾಗೂ ಸುಸಂಸ್ಕೃತರನ್ನಾಗಿ ಮಾಡುವಲ್ಲಿ ಅಪಾರವಾಗಿ ಶ್ರಮಿಸುತ್ತಾರೆ. ಶಿಕ್ಷಕನು ದೇವರು ನೀಡಿದ ಸುಂದರವಾದ ಕೊಡುಗೆಯಾಗಿದೆ ಏಕೆಂದರೆ ದೇವರು ಇಡೀ ಪ್ರಪಂಚವನ್ನು ಸೃಷ್ಟಿಕರ್ತನಾದರೆ, ಶಿಕ್ಷಕ ಇಡೀ ರಾಷ್ಟ್ರದ ಜ್ಞಾನದ ಸೃಷ್ಟಿಕರ್ತನಾಗಿದ್ದಾನೆ. ಶಿಕ್ಷಕನು ವಿದ್ಯಾರ್ಥಿಯ ಜೀವನದಲ್ಲಿ ಹಲವು ತಿರುವುಗಳನ್ನು ನೀಡುತ್ತಾನೆ. ತನ್ನ ಜ್ಞಾನ, ತಾಳ್ಮೆ ಮತ್ತು ಪ್ರೀತಿಯ ಮೂಲಕ ವಿದ್ಯಾರ್ಥಿಯ ಇಡೀ ಜೀವನಕ್ಕೆ ಬಲವಾದ ಆಕಾರವನ್ನು ನೀಡುತ್ತಾನೆ. ಉತ್ತಮ ನಾಳೆಗಾಗಿ ತಮ್ಮ ಜೀವನದ ಅನುಭವವನ್ನು ಹಂಚಿಕೊಳ್ಳುತ್ತಾರೆ.

ಒಬ್ಬ ಶಿಕ್ಷಕ ಬುದ್ಧಿವಂತ ಹಾಗೂ ದಡ್ಡ ವಿದ್ಯಾರ್ಥಿಯನ್ನು ಒಂದೇ ರೀತಿ ನೋಡುತ್ತಾರೆ. ದಡ್ಡ ವಿದ್ಯಾರ್ಥಿ ಬಗ್ಗೆ ಹಚ್ಚು ಕನಿಕರ ಪಡುತ್ತಾನೆ ಜೊತೆಗೆ ಹೆಚ್ಚು ಆಸಕ್ತಿ ವಹಿಸಿ ದಡ್ಡ ವಿದ್ಯಾರ್ಥಿಗೆ ಕಲಿಸಲು ಪ್ರಯತ್ನಿಸುತ್ತಾನೆ. ಎಲ್ಲಾ ವಿದ್ಯಾರ್ಥಿಗಳ ಯಶಸ್ಸು ಮತ್ತು ಸಂತೋಷವನ್ನು ಮಾತ್ರ ನೋಡಲು ಬಯಸುತ್ತಾರೆ ಇಂತಹ ಅಪರೂಪದ ಗುಣ ಹೊಂದಿರುವ ಶಿಕ್ಷಕರು ಸಮಾಜದಲ್ಲಿ ಪ್ರತಿಷ್ಠಿತ ವ್ಯಕ್ತಿಯಾಗಿದ್ದಾರೆ. ನಾವು ಯಾ-ರಿಗೆ ಗೌರವ ನೀಡದೇ ಇದ್ದರೂ ಸಹ ನಮಗೆ ವಿದ್ಯೆ ಕಲಿಸಿದ ಗುರುಗಳಿಗೆ ಮಾತ್ರ ಗೌರವ ನೀಡುವುದನ್ನು ಮರೆಯುವುದಿಲ್ಲ. ಇಂತಹ ಗೌರವವನ್ನು ತಾಲ್ಲೂಕಿನ ಶಿಕ್ಷಕರು ಉಳಿಸಿಕೊಳ್ಳಬೇಕಾದರೆ ಶೈಕ್ಷಣಿಕ ಪ್ರಗತಿಯನ್ನು ಸಾಧಿಸಬೇಕು. ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಫಲಿತಾಂಶ ತಂದು ಕೊಡಬೇಕು. ಯಾವುದೇ ಕಾರಣ-ಕ್ಕೂ ವಿದ್ಯಾರ್ಥಿಗಳಿಗೆ ಪಾಠ ಮಾಡುವಲ್ಲಿ ಮೋಸ ಮಾಡಬಾರದು ಎಂದು ಮನವಿ ಮಾಡಿದರು. ವಿಧಾನ ಪರಿಷತ್ ಸದಸ್ಯರಾದ ಕೆ.ವಿವೇಕಾನಂದ ಅವರು ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಸಾವಿತ್ರಿಬಾಯಿಪುಲೆ ಅವರ ಭಾವಚಿತ್ರವನ್ನು ಅನಾವರಣ ಮಾಡಿದರು.


ನಂತರ ಮಾತನಾಡಿ ಪೋಷಕರು ಶಿಕ್ಷಕರಿಂದ ಬಹಳಷ್ಟು ನಿರೀಕ್ಷಿಸುತ್ತಾರೆ. ಹಾಗಾಗಿ ಶಿಕ್ಷಕರು ಪೋಷಕರ ನಿರೀಕ್ಷೆಯನ್ನು ಹುಸಿಗೊಳಿಸದೇ ವಿದ್ಯಾರ್ಥಿಗಳನ್ನು ತಯಾರು ಮಾಡಬೇಕು. ಪಾಠದ ಜೊತೆಗೆ ವಿದ್ಯಾರ್ಥಿಗಳ ಆರೋಗ್ಯದ ಕಡೆಗೂ ಶಿಕ್ಷಕರು ಹೆಚ್ಚು ಗಮನ ಹರಿಸುತ್ತಾರೆ. ಸ್ವಚ್ಛವಾದ ಬಟ್ಟೆಗಳನ್ನು ಧರಿಸಲು, ಗುಣಮಟ್ಟದ ಆಹಾರವನ್ನು ಸೇವಿಸಲು, ಪೋಷಕರನ್ನು ನೋಡಿಕೊಳ್ಳಲು, ಸಹೋದರ, ಸಹೋದರಿಯರನ್ನು ನೋಡಿಕೊಳ್ಳಲು ಹೇಳಿಕೊಡುತ್ತಾರೆ. ಇಂತಹ ಶಿಕ್ಷಕರನ್ನು ಪೋಷಕರು ಬಯಸುತ್ತಾರೆ. ಹಾಗಾಗಿ ಶಿಕ್ಷಕರು ತಮ್ಮ ಜವಾಬ್ದಾರಿ ಅರಿತು ಸೇವೆ ಸಲ್ಲಿಸಬೇಕು ಎಂದು ಸಲಹೆ ನೀಡಿದರು. ಪಾಂಡವಪುರ ಉಪ ವಿಭಾಗಾಧಿಕಾರಿ ಡಾ.ಕೆ. ಆರ್.ಶ್ರೀನಿವಾಸ್ ಪ್ರಾಸ್ತಾವಿಕ ನುಡಿಗಳನ್ನಾಡುತ್ತಾ ಸರ್ಕಾರಿ ನೌಕರರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಯಲ್ಲಿ ಓದಿಸುವ ಮೂಲಕ ಇತರರಿಗೆ ಮಾದ-ರಿಯಾಗಬೇಕು. ಆಗ ಇತರೆ ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ದೂರ ಮಾಡಿ ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲು ಮಾಡುತ್ತಾರೆ.

ಆಗ ಮುಚ್ಚಿ ಹೋಗುತ್ತಿರುವ ಸರ್ಕಾರಿ ಶಾಲೆಗಳನ್ನು ಉಳಿಸಲು ಸಾಧ್ಯವಾಗುತ್ತದೆ ಎಂದು ಸರ್ಕಾರಿ ನೌಕರರಿಗೆ ಹಾಗೂ ಶಿಕ್ಷಕರಿಗೆ ಸಲಹೆ ನೀಡಿದರು. ಶಿಕ್ಷಣ ತಜ್ಞ ಮಂಗಳೂರು ಅರವಿಂದ್ ಚಿಕ್ಕಾಡಿ ಕಾರ್ಯಕ್ರಮ ಕುರಿತು ಪ್ರಧಾನ ಉಪನ್ಯಾಸ ನೀಡಿ ಗುಣಮಟ್ಟದ ಶಿಕ್ಷಣದಲ್ಲಿ ಶಿಕ್ಷಕರ ಪಾತ್ರ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ವಿವೇಕಾನಂದ, ಪುರಸಭೆಯ ಅಧ್ಯಕ್ಷೆ ಪಂಕಜಾಪ್ರಕಾಶ್, ಉಪಾಧ್ಯಕ್ಷೆ ಸೌಭಾಗ್ಯ ಉಮೇಶ್, ತಹಸೀಲ್ದಾರ್ ಡಾ.ಎಸ್.ಯು. ಅಶೋಕ್, ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಕೆ.ತಿಮ್ಮೇಗೌಡ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸಿ.ಎನ್.ಯತೀಶ್, ಕ್ಷೇತ್ರ ಸಮನ್ವಯಾಧಿಕಾರಿ ಮೋಹನ್, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಕೆ.ಸುಷ್ಮಾ, ಸಿಪಿಐ ಸುಮಾರಾಣಿ, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಆರ್.ಆನಂದಕುಮಾರ್, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಹೆಚ್.ಆರ್.ಪೂರ್ಣಚಂದ್ರತೇಜಸ್ವಿ, ಕಾರ್ಯದರ್ಶಿ ಎಲ್.ಎಸ್.ಧರ್ಮಪ್ಪ, ಮಂಡ್ಯ ಜಿಲ್ಲಾ ದಿಶಾ ಸಮಿತಿ ಸದಸ್ಯ ನರಸನಾಯಕ್, ಎಸ್.ಎಂ.ಬಸವರಾಜು, ಹಳೆಯೂರು ಯೋಗೇಶ್ ಸೇ-ರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಪ್ರವಾಸಿ ಮಂದಿರದಿಂದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರವನ್ನು ವೇದಿಕೆಯ ವರೆಗೆ ಮೆರವಣಿಗೆ ಮಾಡಲಾಯಿತು.

# ಪ್ಲಾಸ್ಟಿಕ್ ಗನ್ ತೋರಿಸಿ ಚಿನ್ನದ ಅಂಗಡಿ ದರೋಡೆ: ಇಬ್ಬರ ಬಂಧನ

**ಮಾಸ್ಕ್ ದಾರಿಗಳಿಂದ ಪ್ಲಾಸ್ಟಿಕ್ ಗನ್ ತೋರಿಸಿ ದರೋಡೆ, ಬಿಹಾರದಲ್ಲಿ ಮಾದನಾಯಕನಹಳ್ಳಿ ಪೊಲೀಸರಿಂದ ಅರೆಸ್ಟ್**

ದಾಸನಪುರ: ಜೂನ್ 24 ರಂದು ಬೆಂಗಳೂರಿನ ಮಾಗಡಿ ರಸ್ತೆಯ ಕಡಬಗೆರೆ ಕ್ರಾಸ್ ಬಳಿ ಇರುವ ರಾಮ್ ಜ್ಯುವೆಲರ್ಸ್ ಗೆ ರಾತ್ರಿ 10 ರ ಸುಮಾರಿಗೆ ಗನ್ ಹಿಡಿದು ಮುಖಕ್ಕೆ ಮಾಸ್ಕ್ ಧರಿಸಿ ನುಗ್ಗಿದ ದರೋಡೆಕೋರರು 7 ಟ್ರೈಗಳಲ್ಲಿ ಇದ್ದ 120 ಗ್ರಾಂ ಚಿನ್ನಾಭರಣ ದೋಚಿ ಪರಾರಿಯಾಗಿದ್ದರು ಈ ಸಂಬಂಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಅಂಗಡಿಯ ಮಾಲೀಕ ಕನ್ನಯ್ಯ ಲಾಲ್ ಪ್ರಕರಣ ದಾಖಲಿಸಿದ್ದರು.





ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ಎಂ ಕೆ ಮುರಳೀಧರ್ ಮತ್ತು ತಂಡ ವಿವಿಧ ಆಯಾಮಗಳಲ್ಲಿ ತನಿಖೆ ಪ್ರಾರಂಭಿಸಿದ್ದರು. ಪೊಲೀಸ್ ರಿಗೆ ಮೇಲ್ನೋಟಕ್ಕೆ ದರೋಡೆಕೋರರು ತೋ-ರಿಸಿದ್ದು ಪ್ಲಾಸ್ಟಿಕ್ ಗನ್ ಎಂಬುದು ದೃಢವಾಗಿದ್ದು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದರು ಸಿಸಿ ಕ್ಯಾಮೆರಾ ದಲ್ಲಿ ಸೆರೆಯಾಗಿದ್ದ ಆರೋಪಿಗಳ ಜಾಡು ಹಿಡಿದು ಹೊರಟ ಪೊಲೀಸರಿಗೆ ದರೋಡೆ ಕೋರರು ವಿವಿಧ ರಾಜ್ಯಗಳಲ್ಲಿ ಸುತ್ತಾಡಿ ತಲೆಮರಿಸಿಕೊಂಡಿರುವ ಬಗ್ಗೆ ಮಾಹಿತಿ ದೊರಕಿದ್ದು ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ.



ಉಡುಪಿ, ಮಂಗಳೂರು ಹಾಗೂ ಒರಿಸ್ಸಾ ಮೂಲದ ದರೋಡೆಕೋರರು ಇವರಾಗಿದ್ದು ಬಿಹಾರದಲ್ಲಿ ನೌಶದ್ ಹಾಗೂ ಇಫ್ತಾಹಿಕರ್ ಎಂಬುವರನ್ನು ಬಂಧಿಸಿ ಮಾದನಾಯಕನಹಳ್ಳಿ ಪೊಲೀಸ್ ಇನ್ಸ್ಪೆಕ್ಟರ್ ಮುರಳಿಧರ್ ನೇತೃತ್ವದಲ್ಲಿ ಠಾಣೆಗೆ ಕರೆತರಲಾಗಿದೆ.

ಬಂದಿದ್ದರಿಂದ 30 ಲಕ್ಷ ಮೌಲ್ಯದ 90 ಗ್ರಾಂ ಚಿನ್ನಾಭರಣ ಹಾಗೂ ಎರಡು ಕಾರುಗಳನ್ನು ವಶಪಡಿಸಿಕೊಳ್ಳಲಾಗಿದೆ.

# ವರದಿ ಕೇಳಿದ ಮಹಿಳಾ ಆಯೋಗ

ದಾವಣಗೆರೆ: ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಅವರನ್ನು ಶ್ವಾನಕ್ಕೆ ಹೋಲಿಸಿ ಮಾತನಾಡಿ ಅವಮಾನಿಸಿದ್ದ ಹರಿಹರ ಬಿಜೆಪಿ ಶಾಸಕ ಬಿ.ಪಿ. ಹರೀಶ್ ಹೇಳಿಕೆ ಕುರಿತು ವರದಿ ನೀಡುವಂತೆ ರಾಜ್ಯ ಮಹಿಳಾ ಆಯೋಗ ಪತ್ರ ಬರೆದಿದೆ.





ಪ್ರಕರಣವನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಂಡು ಶೀಘ್ರ ವರದಿ ನೀಡುವಂತೆ ಆಯೋಗ ಕೋರಿದೆ. ಶಾಸಕರ ಈ ಹೇಳಿಕೆಯನ್ನು ಖಂಡಿಸಿರುವ ರಾಜ್ಯ ಮಹಿಳಾ ಆಯೋಗ, ಶಾಸಕರ ವಿರುದ್ಧ ಕೈಗೊಂಡಿರುವ ಕ್ರಮಗಳನ್ನು ಕುರಿತ ವರದಿ ಸಲ್ಲಿಸುವಂತೆ ಪೂರ್ವ ವಲಯದ ಐಜಿಪಿ ಬಿ.ಆರ್. ರವಿಕಾಂತೇಗೌಡ ಅವರಿಗೆ ಪತ್ರ ಬರೆದಿದೆ. ಮಹಿಳಾ ಅಧಿಕಾರಿಯನ್ನು ಸಾರ್ವಜನಿಕವಾಗಿ ಅವಮಾನಿಸಿರುವುದನು ಗಂಭೀರವಾಗಿ ಪರಿಗಣಿಸಿರುವ ಆಯೋಗವು ಕ್ರಮಕ್ಕೆ ಮುಂದಾಗಿದೆ. ಮೂರು ದಿನಗಳ ಹಿಂದೆ ಶಾಸಕ ಹರೀಶ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಅವರನ್ನು ನಾಯಿಗೆ ಹೋಲಿಸಿ ಮಾತನಾಡಿದ್ದರು. ನಂತರ ಉಮಾ ಪ್ರಶಾಂತ್ ದೂರು ದಾಖಲಿಸಿದ್ದರು.

## ಇಂದು ರಾತ್ರಿ ಸಂಭವಿಸುವ ಚಂದ್ರಗ್ರಹಣವನ್ನು ಬರಿಗಣ್ಣಿನಿಂದ

# ನೋಡಿ ಆನಂದಿಸಲು ವಿಜ್ಞಾನಿಗಳ ಕರೆ



**ಬೆಂಗಳೂರು: 7 ರಂದು ರಾತ್ರಿ ಸಂಭವಿಸುವ ಸಂಪೂರ್ಣ ಚಂದ್ರಗ್ರಹಣವನ್ನು ಬರಿಗಣ್ಣಿನಿಂದ ನೋಡಿ ಆನಂದಿಸುವಂತೆ ಖಗೋಳ ವಿಜ್ಞಾನಗಳು ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಭಾರತೀಯ ಖಗೋಲ ಭೌತವಿಜ್ಞಾನ ಸಂಸ್ಥೆಯ ನಿರುಜ್ ಮೋಹನ್ ರಾಮಾನುಜಂ, ಜವಾಹರಲಾಲ್ ನೆಹರು ತಾರಾಲಯ ನಿರ್ದೇಶ ಬಿ.ಆರ್.ಗುರುಪ್ರಸಾದ್, ಚಂದ್ರಗ್ರಹಣವು ಕರ್ನಾಟಕ ಸೇರಿದಂತೆ ದೇಶಾದ್ಯಂತ ಗೋಚರವಾಗಲಿದೆ. ಈ ಅಪರೂಪದ ಕ್ಷಣವನ್ನು ಬರಿಗಣ್ಣಿನಿಂದ ಸುಲಭವಾಗಿ ನೋಡಬಹುದಾಗಿದೆ.**

ಈ ನೆರಳಿನ ಆಟವನ್ನು ಕಣ್ಣುಂಬಿಕೊಳ್ಳುವ ಅಪೂರ್ವ ಕ್ಷಣವನ್ನು ಯಾರೂ ಕಳೆದುಕೊಳ್ಳಬಾರದು. ಮನೆಯಿಂದ ಹೊರಬಂದು ಈ ಗ್ರಹಣವನ್ನು ಆನಂದಿಸಬೇಕು ಎಂದರು. ನಿರುಜ್ ಮೋಹನ್ ರಾಮಾನುಜಂ ಮಾತನಾಡಿ, ಸೂರ್ಯ ಮತ್ತು ಚಂದ್ರರ ನಡುವೆ ಭೂಮಿ ನಿಖರವಾಗಿ ಬಂದಾಗ ಚಂದ್ರಗ್ರಹಣ ಸಂಭವಿಸುತ್ತದೆ. ಈ ಸಮಯದಲ್ಲಿ ಭೂಮಿಯ ನೆರಳು ಚಂದ್ರನ ಮೇಲೆ ಬೀಳುವುದರಿಂದ ಕೆಲಕಾಲ ಅದು ಮರೆಮಾಡಲ್ಪಡುತ್ತದೆ. ಭೂಮಿಯ ನೆರಳಿನಲ್ಲಿ ಎರಡು ಭಾಗಗಳಿರುತ್ತವೆ ? ಒಳಗಿನ ಗಾಢ ಕತ್ತಲೆಯ ಭಾಗವನ್ನು ಅಂಬ್ರಾ ಎಂದು ಕರೆಯಲಾಗುತ್ತದೆ.

ಹೊರಗಿನ ಮಬ್ಬಾದ ಭಾಗವನ್ನು ಪೆನಂಬ್ರಾ ಎಂದು ಕರೆಯಲಾಗುತ್ತದೆ. ಚಂದ್ರನು ಅಂಬ್ರಾ ನೆರಳಿನೊಳಗೆ ಪ್ರವೇಶಿಸುವಾಗ ಅಥ-'ವಾ ಅದನ್ನು ತೊರೆಯುವಾಗ, ನಾವು ಪಾರ್ಶ್ವ ಚಂದ್ರಗ್ರಹಣವನ್ನು ಬರಿಗಣ್ಣಿನ ಮೂಲಕ ಸುಲಭವಾಗಿ ಗಮನಿಸಬಹುದು. ಚಂದ್ರನು ಸಂಪೂರ್ಣವಾಗಿ ಅಂಬ್ರಾ ನೆರಳಿನೊಳಗೆ ಪ್ರವೇಶಿಸಿದಾಗ, ಸಂಪೂರ್ಣ ಗ್ರಹಣವಾಗಿ ಚಂದ್ರ ತಾಮ್ರವರ್ಣದ ಅಥವಾ ಗಾಢ ಕೆಂಪು ಬಣ್ಣದಲ್ಲಿ ಕಾಣಿಸುಕೊಳ್ಳುತ್ತದೆ. ಪೆನಂಬ್ರಾ ನೆರಳಿನೊಳಗೆ ಚಂದ್ರ ಇರುವಾಗ, ಅದರ ಪ್ರಕಾಶದಲ್ಲಿ ಸ್ವಲ್ಪ ಕಡಿಮೆಯಾದರೂ ಅದನ್ನು ಬರಿಗಣ್ಣಿನಿಂದ ಗುರುತಿಸುವುದು ಕಷ್ಟ ಎಂದರು. ಸೆ. 7ರಂದು ರಾತ್ರಿ 9:57 ಕ್ಕೆ ಚಂದ್ರ, ಭೂಮಿಯ ಗಾಢ ನೆರಳಾದ ಅಂಬ್ರಾದೊಳಗೆ ಪ್ರವೇಶಿಸಲು ಆರಂಭಿಸುತ್ತದೆ, ಇದು ಪಾರ್ಶ್ವ ಚಂದ್ರಗ್ರಹಣದ ಆರಂಭ. ನಂತರ ಚಂದ್ರನ ಹೆಚ್ಚಿನ ಭಾಗ ಭೂಮಿಯ ನೆರಳಿನಿಂದ ಆವರಿಸಲ್ಪಡುತ್ತಾ, 11:01ಕ್ಕೆ ಅದು ಸಂಪೂರ್ಣವಾಗಿ ಅಂಬ್ರಾದೊಳಗೆ ಸೇರುತ್ತದೆ. ಸಂಪೂರ್ಣ ಚಂದ್ರಗ್ರಹಣವು 82 ನಿಮಿಷಗಳವರೆಗೆ, ಅಂದರೆ 12:23ರವರೆಗೆ, ಮುಂದುವರಿಯುತ್ತದೆ ಎಂದು ವಿವರಿಸಿದರು.

ಬಳಿಕ ಚಂದ್ರನು ನಿಧಾನವಾಗಿ ಅಂಬ್ರಾದಿಂದ ಹೊರಬರಲಾರಂಭಿಸಿ, ಈ ಪಾರ್ಶ್ವ ಹಂತವು 1:26ರವರೆಗೆ ಮುಂದುವ-ರಿಯುತ್ತದೆ. ಪಾರ್ಶ್ವಛಾಯಾ ಹಂತವು ರಾತ್ರಿ 8:58ಕ್ಕೆ ಆರಂಭವಾಗಿ, ಬೆಳಗಿನ ಜಾವ 2:25ಕ್ಕೆ ಅಂತ್ಯಗೊಳ್ಳುತ್ತದೆ. ಸಂಪೂರ್ಣ ಚಂದ್ರಗ್ರಹಣದ ಹಂತದಲ್ಲಿ, ಚಂದ್ರನು ಭೂಮಿಯ ನೆರಳಿನೊಳಗೆ ಪ್ರವೇಶಿಸಿದಾಗ ಅದು ಆಕಾಶದಲ್ಲಿ ಕಾಣಿಸದೆ ಹೋಗುತ್ತದೆ ಎಂದು ನಾವು ಭಾವಿಸಬಹುದು. ಆದರೆ ಹಾಗಾಗದೆ, ಅದು ಗಾಢ ಕೆಂಪು ಅಥ-'ವಾ ತಾಮ್ರವರ್ಣದಲ್ಲಿ ಗೋಚರಿಸುತ್ತದೆ ಎಂದು ಹೇಳಿದರು.

ಚಂದ್ರಗ್ರಹಣವನ್ನು ವೀಕ್ಷಿಸಲು ಯಾವುದೇ ವಿಶೇಷ ಸಾಧನಗಳ ಅಗತ್ಯವಿಲ್ಲ. ಬರಿಗಣ್ಣಿನಿಂದ ನೋಡಲು ಇದು ಸಂಪೂರ್ಣ ಸುರಕ್ಷಿತ. ಆದರೆ ದೂರದರ್ಶಕ ಅಥ-'ವಾ ದುರ್ಬೀನನ್ನು ಬಳಸಿದರೆ ವೀಕ್ಷಣೆಯ ಅನುಭವ ಇನ್ನಷ್ಟು ಸುಂದರವಾಗುತ್ತದೆ. ಗ್ರಹಣವೆಂಬುದು ನೆರಳಿನ ಆಟ ಮಾತ್ರ. ಇದನ್ನು ಭಾರತದಲ್ಲಿ ಆರ್ಯಭಟನ ಕಾಲದಲ್ಲೇ ತಿಳಿಯಲಾಗಿತ್ತು. ಇದರಿಂದ ಮನುಷ್ಯ, ಪ್ರಾಣಿ, ಸಸ್ಯ ಅಥವಾ ಆಹಾರಕ್ಕೆ ಯಾವುದೇ ಹಾನಿ ಉಂಟಾಗುವುದಿಲ್ಲ. ಆದ್ದರಿಂದ ಜನರು ಹೊರಗೆ ಬಂದು ಗ್ರಹಣವನ್ನು ವೀಕ್ಷಿಸುವಾಗ ಆಹಾರ ಸೇವಿಸುವುದೂ ಸಂಪೂರ್ಣ ಸುರಕ್ಷಿತ ಎಂದು ಅವರು ವಿವರಣೆ ನೀಡಿದರು.

# ಚಂದ್ರಗ್ರಹಣದ ಹಿನ್ನೆಲೆಯಲ್ಲಿ ಘಾಟಿ ಸುಬ್ರಮಣ್ಯ ದೇವಾಲಯ ಬಂದ್

ದೊಡ್ಡಬಳ್ಳಾಪುರ: ಚಂದ್ರಗ್ರಹಣದ ಹಿನ್ನೆಲೆಯಲ್ಲಿ ತಾಲೂಕಿನ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ಶ್ರೀ ಘಾಟಿ ಸುಬ್ರಮಣ್ಯ ಸ್ವಾಮಿ ದೇವಾಲಯವನ್ನು 7ರಂದು ಸಂಜೆ 4.30ಕ್ಕೆ ಮುಚ್ಚಲಾಗುವುದು ಎಂದು ದೇವಾಲಯದ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

ಸೆ. 7ರ ಸಂಜೆ 4.30 ಗಂಟೆಗೆ ದೇವಾಲಯದ ಬಾಗಿಲುಗಳನ್ನು ಮುಚ್ಚಲಿದ್ದು, ಮರುದಿನ ಬೆಳಿಗ್ಗೆ ಶುದ್ಧೀಕರಣದ ವಿಧಿಗಳ ನಂತರ ಪುನಃ ಭಕ್ತರ ದರ್ಶನಕ್ಕಾಗಿ ತೆರೆಯಲಾಗುತ್ತದೆ.

2025ರ ವಿಶೇಷ ಚಂದ್ರಗ್ರಹಣ:

ಈ ಬಾರಿ ಸಂಭವಿಸುವ ಚಂದ್ರಗ್ರಹಣವು 2025 ರಲ್ಲಿ ಖಗೋಳದಲ್ಲಿ ಸಂಭವಿಸುವ ಅತ್ಯಂತ ಪ್ರಮುಖ ಘಟನೆಗಳಲ್ಲಿ ಒಂದೆಂದು ವಿಜ್ಞಾನಿಗಳು ತಿಳಿಸಿದ್ದಾರೆ. ಭಾದ್ರಪದ ಮಾಸದ ಪೂರ್ಣಿಮೆ ದಿನವಾದ ಸೆ.7ರಂದು ಇದು ಗೋಚರಿಸಲಿದೆ. ಈ ವರ್ಷ ಎರಡನೇ ಬಾರಿಗೆ ಸಂಭವಿಸುವ ಚಂದ್ರಗ್ರಹಣವಾಗಿದ್ದು, ಹಾಗೆ ವರ್ಷದ ಕೊನೆಯ ಗ್ರಹಣವೂ ಹೌದು.



ಏಷ್ಯಾ ಖಂಡದ ಬಹುತೇಕ ಭಾಗಗಳು ಸೇರಿದಂತೆ ಆಸ್ಟ್ರೇಲಿಯಾ, ಆಫ್ರಿಕಾ ಹಾಗೂ ಯುರೋಪಿನ ಹಲವೆಡೆಗಳಲ್ಲಿಯೂ ಈ ಗ್ರಹಣ ಸ್ಪಷ್ಟವಾಗಿ ಗೋಚರಿಸಲಿದೆ. ವಿಶೇಷವೆಂದರೆ, ಭಾರತದಲ್ಲಿ ಈ ಗ್ರಹಣ ಸಂಪೂರ್ಣವಾಗಿ ಗೋಚರವಾಗುವುದರಿಂದ ಧಾರ್ಮಿಕಾಸಕ್ತರು ಹಾಗೂ ಖಗೋಳಾಸಕ್ತರಿಗೆ ಇದು ಅಪೂರ್ವ ಅನುಭವವಾಗಲಿದೆ.

ರಕ್ತ ಚಂದ್ರನ ದೃಶ್ಯ:

ಚಂದ್ರಗ್ರಹಣದ ಸಮಯದಲ್ಲಿ ಚಂದ್ರನು ಕೆಂಪು ಬಣ್ಣದಲ್ಲಿ ಗೋಚರಿಸುವುದರಿಂದ ಇದನ್ನು ಸಾಮಾನ್ಯವಾಗಿ ರಕ್ತ ಚಂದ್ರ ಎಂದು ಕರೆಯಲಾಗುತ್ತದೆ. ಭೂಮಿಯ ವಾತಾವರಣದಿಂದ ಬರುವ ಬೆಳಕಿನ ವಿಲೀನ ಪ್ರಕ್ರಿಯೆಯಿಂದ ಚಂದ್ರನ ಮೇಲ್ಮೈ ಈ ಕೆಂಪು ಮಿಶ್ರಿತ ಬಣ್ಣವನ್ನು ತಳೆಯುತ್ತದೆ. ಈ ವೈಜ್ಞಾನಿಕ ಅಂಶವು ಧಾರ್ಮಿಕ ಭಾವನೆಗಳೊಂದಿಗೆ ಮಿಶ್ರಣಗೊಂಡು ಜನರಲ್ಲಿ ವಿಶೇಷ ಕುತೂಹಲವನ್ನು ಹುಟ್ಟಿಸುತ್ತದೆ.

ಧಾರ್ಮಿಕ ಆಚರಣೆ ಮತ್ತು ನಿರ್ಬಂಧ:

ಚಂದ್ರಗ್ರಹಣ, ಸೂರ್ಯಗ್ರಹಣಗಳ ಸಮಯದಲ್ಲಿ ಹಿಂದು ಧಾರ್ಮಿಕ ಪರಂಪರೆಯ ಪ್ರಕಾರ ದೇವಸ್ಥಾನಗಳನ್ನು ಮುಚ್ಚಿ, ದೇವರ ಪೂಜೆ,ಅರ್ಚನೆಗಳನ್ನು ನಿಲ್ಲಿಸುವ ಆಚರಣೆ ಹಲವು ಶತಮಾನಗಳಿಂದ ನಡೆದುಕೊಂಡು ಬಂದಿದೆ. ಗ್ರಹಣ ಮುಗಿದ ನಂತರ ದೇವಸ್ಥಾನದಲ್ಲಿ ಶುದ್ಧೀಕರಣ ವಿಧಿಗಳನ್ನು ನೆರವೇರಿಸಿ ನಂತರ ದೇವರ ದರ್ಶನವನ್ನು ಪುನಃ ಪ್ರಾರಂಭಿಸುವುದು ರೂಢಿಗತವಾಗಿದೆ.

ಸಾಮಾನ್ಯವಾಗಿ ಶ್ರೀ ಘಾಟಿ ಸುಬ್ರಮಣ್ಯ ದೇವಾಲಯದಲ್ಲಿ ಪ್ರತಿದಿನ ರಾತ್ರಿ 8.30ರವರೆಗೆ ದರ್ಶನಕ್ಕೆ ಅವಕಾಶವಿದ್ದರೂ, ಈ ಬಾರಿ ಗ್ರಹಣದ ಕಾರಣದಿಂದ ಸಂಜೆ 4.30 ಕ್ಕೆ ಬಾಗಿಲು ಮುಚ್ಚಲಾಗುತ್ತದೆ.

ಇದರಿಂದ ಭಕ್ತರು ತಮ್ಮ ಕ್ಷೇತ್ರ ದರ್ಶನದ ದಿನವನ್ನ ಬದಲಿಸಿಕೊಳ್ಳುವಂತೆ ದೇವಾಲಯದ ಆಡಳಿತ ಮಂಡಳಿ ಮನವಿ ಮಾಡಿದೆ. ಘಾಟಿ ಸುಬ್ರಮಣ್ಯ ದೇವಸ್ಥಾನವು ಕರ್ನಾಟಕದಲ್ಲೇ ಪ್ರಸಿದ್ಧವಾದ ಸರ್ಪಸುಬ್ರಮಣ್ಯ ಆರಾಧನಾ ಕ್ಷೇತ್ರವಾಗಿದ್ದು, ಪ್ರತಿದಿನ ಸಾವಿರಾರು ಭಕ್ತರು ಇಲ್ಲಿ ಆಗಮಿಸುತ್ತಾರೆ. ಭಾನುವಾರ ಹಾಗೂ ಪೂರ್ಣಿಮೆಯ ದಿನವಾಗಿರುವುದರಿಂದ ಹೆಚ್ಚಿನ ಭಕ್ತರ ಆಗಮನ ನಿರೀಕ್ಷಿತವಾಗಿದೆ. ಆದ್ದರಿಂದ ದೇವಾಲಯ ಮುಚ್ಚುವ ವೇಳೆಯನ್ನು ಸ್ಪಷ್ಟವಾಗಿ ಪ್ರಕಟಿಸಿರುವುದು ಭಕ್ತರಿಗೆ ಅನುಕೂಲವಾಗಲಿದೆ ಎಂದು ಕಾರ್ಯದರ್ಶಿ ಪಿ.ದಿನೇಶ್ ಮತ್ತು ಉಪ ಆಯುಕ್ತರು ತಿಳಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.